60

# ಕರ್ನಾಟಕ ಲೋಕಾಯುಕ್ತ

ನಂ.ಕಂಪ್ಲೆಂಟ್/ಉಪಲೋಕ್/ಬಿಡಿ–1770/2016/ಡಿಆರ್‌ಇ–1

ಬಹುಮಹಡಿಗಳ ಕಟ್ಟಡ,
ಡಾ:ಅಂಬೇಡ್ಕರ್ ವೀದಿ,
ಬೆಂಗಳೂರು.
ದಿನಾಂಕ: 12/04/2017

## ಕರ್ನಾಟಕ ಲೋಕಾಯುಕ್ತ ಕಾಯಿದೆ, 1984 ರ ಕಲಂ 12(1) ರನ್ವಯ ವರದಿ

ವಿಷಯ: ಶ್ರೀ.ಎಂ.ಎನ್.ಜೀವಣ್ಣ, ಸಹಾಯಕ ಕಂದಾಯ ಅಧಿಕಾರಿ, ನಗರ ಯೋಜನೆ, ಕರ್ನಾಟಕ ಗೃಹ ಮಂಡಳಿ, ಜಿಲ್ಲಾಡಳಿತ ಭವನ, ದಾವಣಗೆರೆ, ಇವರ ವಿರುದ್ಧ ಸಲ್ಲಿಸಿದ ದೂರಿನ ಸಂಬಂಧ ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 12(1) ರಡಿಯಲ್ಲಿನ ವರದಿ.

******

1) ಶ್ರೀ.ಮಣಿಕಂಠ ಕೆ ಬಿನ್ ಕರುಣಾಕರನ್, ಜಿಲ್ಲಾಧ್ಯಕ್ಷರು, ಶ್ರೀರಾಮಸೇನೆ, 4ನೇ ಮೇನ್, 1ನೇ ಕ್ರಾಸ್, ವಿನೋಬಾನಗರ, ದಾವಣಗೆರೆ, (ಇನ್ನು ಮುಂದೆ ದೂರುದಾರರು ಎಂದು ಕರೆಯಲ್ಪಡುತ್ತಾರೆ) ರವರು ಶ್ರೀ.ಎಂ.ಎನ್.ಜೀವಣ್ಣ, ಸಹಾಯಕ ಕಂದಾಯ ಅಧಿಕಾರಿ, ನಗರ ಯೋಜನೆ, ಕರ್ನಾಟಕ ಗೃಹ ಮಂಡಳಿ, ಜಿಲ್ಲಾಡಳಿತ ಭವನ, ದಾವಣಗೆರೆ, (ಇನ್ನು ಮುಂದೆ ಎದುರುದಾರರು ಎಂದು ಕರೆಯಲ್ಪಡುತ್ತಾರೆ) ಇವರ ವಿರುದ್ಧ ದೂರು ಸಲ್ಲಿಸಿದ ಮೇರೆಗೆ, ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ರ ಕಲಂ 9 ರಡಿಯಲ್ಲಿ ದತ್ತವಾದ, ಅಧಿಕಾರ ಚಲಾಯಿಸಿ, ವಿಚಾರಣೆಗೆ ತೆಗೆದುಕೊಂಡು ತನಿಖೆ ಮಾಡಿದೆ.

2) ದೂರುದಾರರು ತಮ್ಮ ದೂರಿನಲ್ಲಿ ಎದುರುದಾರರು ಸರ್ಕಾರಿ ಸೇವೆಯಲ್ಲಿ ಸೇರಿಕೊಂಡು ಬೇನಾಮಿ ವ್ಯಕ್ತಿಗಳ ಹೆಸರಿಗೆ ಮತ್ತು ಕುಟುಂಬದ ಸದಸ್ಯರ ಹೆಸರಿಗೆ ತಮ್ಮ ಅಧಿಕಾರವನ್ನು ದುರುಪಯೋಗ ಪಡಿಸಿಕೊಂಡು ಅಕ್ರಮ ಆಸ್ತಿಯನ್ನು ಹೊಂದಿರುತ್ತಾರೆ. ಇವರು ದಾವಣಗೆರೆ ನಗರದಲ್ಲಿ ಬೆಲೆಬಾಳುವ ನಿವೇಶನ ಮತ್ತು ವಸತಿ ಮತ್ತು ಐಷಾರಾಮಿ ವಾಹನಗಳನ್ನು ಹೊಂದಿದ್ದಾರೆಂದು ಆಪಾದಿಸಿ ದೂರನ್ನು ಸಲ್ಲಿಸಿರುತ್ತಾರೆ.

3) ದೂರುದಾರರ ದೂರಿನ ಬಗ್ಗೆ ತನಿಖೆ ನಡೆಸಿ ವರದಿ ಸಲ್ಲಿಸುವಂತೆ ಪೊಲೀಸ್ ಅಧೀಕ್ಷಕರು, ಕರ್ನಾಟಕ ಲೋಕಾಯುಕ್ತ, ದಾವಣಗೆರೆ ಇವರಿಗೆ ಆದೇಶಿಸಲಾಗಿತ್ತು. ಪೊಲೀಸ್ ಅಧೀಕ್ಷಕರು ಪೊಲೀಸ್ ನಿರೀಕ್ಷಕರ ಮೂಲಕ ತನಿಖೆ ನಡೆಸಿ ವರದಿಯನ್ನು ಸಲ್ಲಿಸಿದ್ದು, ವರದಿಯಲ್ಲಿ ಪಿ.ಐ.ರವರು ಸಲ್ಲಿಸಿದ ವಿಚಾರಣಾ ವರದಿಯನ್ನು ಕೂಲಂಕುಷವಾಗಿ ಪರಿಶೀಲಿಸಲಾಗಿ ಶ್ರೀ.ಎಂ.ಎನ್.ಜೀವಣ್ಣರವರು ಗಳಿಸಿರುವ ಆಸ್ತಿಗಳು ತಮ್ಮ ಸಂಬಳದ ಉಳಿತಾಯ ಹಾಗೂ ಬ್ಯಾಂಕಿನ ಸಾಲದ ಮುಖಾಂತರ ಮಾಡಿರುವುದು ಪಿ.ಐ.ರವರ ವಿಚಾರಣಾ ಕಾಲಕ್ಕೆ ಕಂಡುಬಂದಿದ್ದು, ಹೆಚ್ಚುವರಿಯಾಗಿ ಅಕ್ರಮ ಆಸ್ತಿಯನ್ನು ಹೊಂದಿರುವುದು

ಕಂಡುಬಂದಿರುವುದಿಲ್ಲ. ಅರ್ಜಿದಾರರು ನೀಡಿರುವ ಅರ್ಜಿಯಲ್ಲಿನ ಅಂಶಗಳು ವಾಸ್ತವಾಂಶದಿಂದ ಕೂಡಿರುವುದಿಲ್ಲ ಎಂದು ಹೇಳಿರುತ್ತಾರೆ.

4) ತನಿಖಾ ವರದಿಯನ್ನು ಪರಿಶೀಲಿಸಿದಾಗ, ಎದುರುದಾರರಿಗೆ ಯಾವ ಮೂಲದಿಂದ ಎಷ್ಟು ಆದಾಯವಿದೆ ಮತ್ತು ಅವರ ಆದಾಯ ಮತ್ತು ಖರ್ಚಿನ ಬಗ್ಗೆ ಯಾವುದೇ ವಿವರವನ್ನು ತನಿಖಾಧಿಕಾರಿ ಲೆಕ್ಕ ಹಾಕದೆ ವರದಿಯನ್ನು ನೀಡಿರುವುದು ಕಂಡುಬರುತ್ತದೆ. ಆ ಕಾರಣದಿಂದ ತನಿಖಾಧಿಕಾರಿಯ ವರದಿಯನ್ನು ಒಪ್ಪಲು ಸಾಧ್ಯವಿಲ್ಲ.

5) ದೂರಿನ ಬಗ್ಗೆ ಮತ್ತು ವರದಿಯ ಬಗ್ಗೆ ಆಕ್ಷೇಪಣೆಯನ್ನು ಸಲ್ಲಿಸುವಂತೆ ಎದುರುದಾರರಿಗೆ ಆದೇಶಿಸಲಾಗಿತ್ತು. ಎದುರುದಾರರು ಆಕ್ಷೇಪಣೆಯನ್ನು ಸಲ್ಲಿಸಿದ್ದು, ಆಕ್ಷೇಪಣೆಯಲ್ಲಿ ವರದಿಯಲ್ಲಿ ಉಲ್ಲೇಖಿಸಿರುವ ಐಟಂ ನಂ.1 ಆಸ್ತಿಯನ್ನು ದಾವಣಗೆರೆ ನಗರದ ಆಂಜನೇಯ ಬಡಾವಣೆಯಲ್ಲಿರುವ ನಿವೇಶನದಲ್ಲಿ ಬ್ಯಾಂಕ್ ಸಾಲ ಪಡೆದು ಮನೆ ಕಟ್ಟಿರುತ್ತಾರೆ. ಐಟಂ ನಂ.5 ರಲ್ಲಿರುವ ಮನೆ ಮತ್ತು ಹಿತ್ತಲು ಪಿತ್ರಾರ್ಜಿತ ಆಸ್ತಿಯಾಗಿರುತ್ತದೆ. ಐಟಂ ನಂ.3 ರ ಆಸ್ತಿಯನ್ನು ಖರೀದಿಸಲು ಅನುಮತಿಗಾಗಿ ಇಲಾಖಾ ಮುಖ್ಯಸ್ಥರಿಗೆ ಮನವಿ ಸಲ್ಲಿಸಿದ್ದು, ಅನುಮತಿಯ ನಿರೀಕ್ಷೆಯಲ್ಲಿದ್ದು, ಸದರಿ ಆಸ್ತಿಗಳನ್ನು ಹೊರತುಪಡಿಸಿ ಬೇರೆ ಆಸ್ತಿಗಳನ್ನು ಹೊಂದಿರುವುದಿಲ್ಲ. ಸದರಿ ಆಸ್ತಿಗಳನ್ನು ಪ್ರತಿವರ್ಷ ಸಲ್ಲಿಸುವ ಅವರ ಆಸ್ತಿ ಮತ್ತು ದಾಯಿತ್ವ ಪಟ್ಟಿಯಲ್ಲಿ ಗುರುತಿಸಿಕೊಂಡಿದ್ದು, ತನಗೆ ತೊಂದರೆ ಕೊಡುವ ಉದ್ದೇಶದಿಂದ ದೂರುದಾರರು ದೂರನ್ನು ಸಲ್ಲಿಸಿರುತ್ತಾರೆಂದು ಹೇಳಿರುತ್ತಾರೆ.

6) ಆಕ್ಷೇಪಣೆಯ ಜೊತೆ ಎದುರುದಾರರು ಸಲ್ಲಿಸಿರುವ ದಾಖಲಾತಿಗಳನ್ನು ಪರಿಶೀಲಿಸಿದಾಗ, ನಿವೇಶನ ಸಂ.4737/ಎ ರಲ್ಲಿ ಮನೆ ಕಟ್ಟಲು ಗೃಹ ಆಯುಕ್ತರು, ಕರ್ನಾಟಕ ಗೃಹ ಮಂಡಳಿ ಇವರಿಂದ ಅನುಮತಿಯನ್ನು ಪಡೆದುಕೊಂಡಿರುವುದು ಕಂಡುಬರುತ್ತದೆ. ಆದರೆ ಎದುರುದಾರರ ಹೆಸರಿನಲ್ಲಿ ಮತ್ತು ಅವರ ಹೆಂಡತಿಯ ಹೆಸರಿನಲ್ಲಿ ಆಸ್ತಿ ಖರೀದಿಸಲು ಇಲಾಖೆಯ ಪೂರ್ವಾನುಮತಿಯನ್ನು ಪಡೆದಿರುವುದು ಕಂಡುಬಂದಿರುವುದಿಲ್ಲ. ಆಸ್ತಿಯನ್ನು ಖರೀದಿಸುವ ಮೊದಲು ಯಾವ ಮೂಲದ ಆದಾಯದಿಂದ ಎದುರುದಾರರು ಆಸ್ತಿಯನ್ನು ಖರೀದಿಸಿರುತ್ತಾರೆನ್ನುವ ಬಗ್ಗೆ ಯಾವುದೇ ವಿವರಗಳನ್ನು ನೀಡಿರುವುದಿಲ್ಲ. ಆಸ್ತಿಯನ್ನು ಖರೀದಿಸಿದ ನಂತರ ಆಸ್ತಿ ಖರೀದಿಸಿರುವ ಬಗ್ಗೆ ಮತ್ತು ಯಾವ ಆದಾಯದ ಮೂಲದಿಂದ ಸದರಿ ಆಸ್ತಿಯನ್ನು ಖರೀದಿಸಲಾಗಿದೆ ಎನ್ನುವ ಬಗ್ಗೆ ಇಲಾಖೆಗೆ ಮಾಹಿತಿಯನ್ನು ನಿಯಮದ ಪ್ರಕಾರ ನೀಡಬೇಕಾಗಿದ್ದು, ಆದರೆ ಎದುರುದಾರರು ತನ್ನ ಇಲಾಖೆಗೆ ಆ ರೀತಿಯಲ್ಲಿ ಯಾವುದೇ ವಿವರಗಳನ್ನು ನೀಡಿರುವುದು ಕಂಡುಬಂದಿರುವುದಿಲ್ಲ. ಜಮೀನು ಖರೀದಿಸಿದ ಬಗ್ಗೆ ಮತ್ತು ಆದಾಯದ ಮೂಲದ ಬಗ್ಗೆ ಇಲಾಖೆಗೆ ಯಾವುದೇ ಮಾಹಿತಿಯನ್ನು ನೀಡದೇ ಇರುವುದು ಎದುರುದಾರರ ದುರ್ನಡತೆಯನ್ನು ತೋರಿಸುತ್ತದೆ.

7) ಮೇಲ್ಕಂಡ ಹಿನ್ನೆಲೆಯಲ್ಲಿ ಕರ್ನಾಟಕ ಲೋಕಾಯುಕ್ತ ಕಾಯ್ದೆ, 1984ರ ಕಲಂ, 12(1) ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಎದುರುದಾರರು ತನ್ನ ಅಧಿಕಾರ ದುರುಪಯೋಗ ಪಡಿಸಿಕೊಂಡು ಅಕ್ರಮ ಆಸ್ತಿಯನ್ನು ಹೊಂದಿರುವ ಬಗ್ಗೆ ಕಾನೂನು ರೀತ್ಯ ಕ್ರಮ ಕೈಗೊಳ್ಳಲು ಭ್ರಷ್ಟಾಚಾರ ನಿಗ್ರಹ ದಳ, ಇವರಿಗೆ ನಿರ್ದೇಶನ ನೀಡಲು ಈ ಮೂಲಕ ಶಿಫಾರಸ್ಸು ಮಾಡಲಾಗಿರುತ್ತದೆ. ತದನಂತರ ಸಕ್ಷಮ ಪ್ರಾಧಿಕಾರವು ಈ ಸಂಸ್ಥೆಗೆ ಅಲ್ಲಿಂದ ಒಂದು ತಿಂಗಳೊಳಗೆ ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 12(2) ರಡಿಯಲ್ಲಿ ಕೈಗೊಳ್ಳಲಾದ ಕ್ರಮದ ಬಗ್ಗೆ ವರದಿ ಸಲ್ಲಿಸುವುದು.

ಸಂಬಂಧಪಟ್ಟ ದಾಖಲೆಗಳನ್ನು ಲಗತ್ತಿಸಿದೆ.

12/4/17.
(ನ್ಯಾಯಮೂರ್ತಿ ಸುಭಾಷ್ ಬಿ. ಆಡಿ)
**ಉಪಲೋಕಾಯುಕ್ತರು-2,**
**ಕರ್ನಾಟಕ ರಾಜ್ಯ, ಬೆಂಗಳೂರು.**